

ಅರುಣ ಪಿ. ಭಟ್ಟ

## ವಾರ ಭವಿಷ್ಯ: 30.8.2019 ರಿಂದ 5.9.2019ರವರೆಗೆ




ಉದ್ಯೋಗ ಹಾಗೂ ವೃತ್ತಿಗೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಸವಾಲೊಂದು ಹೊಸ ಸ್ಥಳದಲ್ಲಿ ಪ್ರಗತಿಗೆ ಹಾಗೂ ಹೊಸ ಜನರು ಒಗ್ಗಟ್ಟಾಗಿ ಕೆಲಸ ಮಾಡುವುದಕ್ಕೆ ಪ್ರೇರಣೆ ನೀಡುತ್ತದೆ.

ಶುಭದಿನ: 1. ಗಣಪತಿಗೆ 108 ದೂರ್ವಾರ್ಚನೆ ಮಾಡಿಸಿ.




ಕುಟುಂಬ ಹೆಮ್ಮೆ ಪಡುವಂತಹ ಬೆಳವಣಿಗೆ ಆಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸಗಳನ್ನು ಪೂರೈಸಲಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ನಿಮ್ಮ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ.

ಶುಭದಿನ: 4. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯಾಪಾರ ವ್ಯವಹಾರಗಳನ್ನು ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಇದರಿಂದ ನಿಮ್ಮಲ್ಲಿ ಉತ್ಸಾಹ ಮೂಡಲಿದೆ.

ಶುಭದಿನ: 3. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿ.




ನಿಮ್ಮ ಮಗ– ಮಗಳ ಪ್ರಗತಿ, ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ತಮ್ಮ ಪಾಲಿನ ಜವಾಬ್ದಾರಿಯನ್ನು ತುಂಬ ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ನಿಮ್ಮ ಪ್ರೀತಿಪಾತ್ರರಿಗೆ ಉಡುಗೊರೆ ನೀಡಲಿದ್ದೀರಿ.

ಶುಭದಿನ: 4. ಹನುಮಾನ್ ಚಾಲಿಸ್ ಪಠಿಸಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ.

ಶುಭದಿನ: 3. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಆದರೆ ಇದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ.

ಶುಭದಿನ: 5. ಆದಿತ್ಯ ಹೃದಯ ಪಠಿಸಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ.

ಶುಭದಿನ: 2. ಚಂಡಿ ಪಾರಾಯಣ ಮಾಡಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ.

ಶುಭದಿನ 3. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿ.




ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಇರುವ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿ ಮಾಡುವ ಸಾಧ್ಯತೆ ಇದೆ. ಆ ಮೂಲಕ ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ.

ಶುಭದಿನ: 2. ವಿಷ್ಣು ಸಹಸ್ರನಾಮ ಪಠಿಸಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸಾಧ್ಯವಾಗುತ್ತದೆ.

ಶುಭದಿನ: 1. ಶಿವಕವಚ ಪಠಣ ಮಾಡಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ.

ಶುಭದಿನ: 5. ರಾಘವೇಂದ್ರ ಸ್ವಾಮಿ ಭಜನೆ ಮಾಡಿ.




ಈ ವಾರ ನಿಮ್ಮ ಧೈರ್ಯ ಹೆಚ್ಚಳ ಆಗಲಿದೆ. ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂಥ ಹಲವು ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಸಂಪೂರ್ಣ ಮಾಡಲು ಆಗುತ್ತದೆ. ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತಾ ಸಾಗುತ್ತದೆ.

ಶುಭದಿನ: 2. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿ.

